ಕರ್ನಾಟಕ ಸರ್ಕಾರ ಕಾರ್ಮಿಕ ಇಲಾಖೆ

ಸಂಖ್ಯೆ: ಅಸಂಕಾ/ಇತರೆ/ಕೋವಿಡ್/ಸಿ.ಆರ್-13/2020-21

ಕಾರ್ಮಿಕ ಆಯುಕ್ತರವರ ಕಛೇರಿ,
ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ,
ಬೆಂಗಳೂರು-560029, ದಿನಾಂಕ: 26-06-2020.

## ಸುತ್ತೋಲೆ

**ವಿಷಯ:** ಅಗಸರು ಹಾಗೂ ಕ್ಷೌರಿಕರಿಗೆ ಕೋವಿಡ್-19ರ ಲಾಕ್‌ಡೌನ್ ಕಾರಣ ರೂ. 5,000/-ಗಳ ಪರಿಹಾರ ನೆರವು ಪಡೆಯಲು ಸೇವಾ ಸಿಂಧು ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಲು ಕೊನೆ ದಿನಾಂಕವನ್ನು ವಿಸ್ತರಿಸುವ ಕುರಿತು.

**ಉಲ್ಲೇಖ:** ಸರ್ಕಾರದ ಆದೇಶ ಸಂಖ್ಯೆ: ಕಾಇ 153 ಎಲ್‌ಇಟಿ 2020(ಭಾಗ-1), ದಿನಾಂಕ: 28-05-2020 ಮತ್ತು 16-06-2020.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಅಗಸ ಹಾಗೂ ಕ್ಷೌರಿಕ ವೃತ್ತಿಯಲ್ಲಿ ತೊಡಗಿರುವ ಕಾರ್ಮಿಕರಿಂದ ದಿನಾಂಕ: 11-06-2020 ರಿಂದ ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್ ಲೈನ್‌ನಲ್ಲಿ ಅರ್ಜಿಯನ್ನು ಆಹ್ವಾನಿಸಿದ್ದು, ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:30-06-2020 ಅನ್ನು ನಿಗದಿಪಡಿಸಲಾಗಿರುತ್ತದೆ. ಆದರೆ, ಹಲವು ಸದರಿ ವೃತ್ತಿ ಸಂಘಟನೆಗಳ ಮುಖಂಡರು ಮತ್ತು ಕಾರ್ಮಿಕರು ಅರ್ಜಿಯನ್ನು ಸಲ್ಲಿಸಲು ಅವಧಿಯನ್ನು ವಿಸ್ತರಿಸುವಂತೆ ಲಿಖಿತ ಹಾಗೂ ಮೌಖಿಕವಾಗಿ ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ ಯಾವುದೇ ಅಗಸ/ಕ್ಷೌರಿಕ ವೃತ್ತಿ ನಿರ್ವಹಿಸುತ್ತಿರುವ ಕಾರ್ಮಿಕರು ಅರ್ಜಿ ಸಲ್ಲಿಸಲಾಗದೆ ಪರಿಹಾರದಿಂದ ವಂಚಿತರಾಗಬಾರದು ಎಂಬ ಕಾರಣದಿಂದ ಒಂದು ಬಾರಿ ಪರಿಹಾರವಾಗಿ ರೂ.5000/-ಗಳಿಗೆ ಸೇವಾಸಿಂಧು ಪೋರ್ಟಲ್‌ನಲ್ಲಿ ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು 10-07-2020ರವೆಗೆ ವಿಸ್ತರಿಸಲಾಗಿದೆ. ಈ ಅಂಶವನ್ನು ವ್ಯಾಪಕ ಪ್ರಚಾರ ನೀಡುವಂತೆ ಕೋರಲಾಗಿದೆ.

26/6
ಆಯುಕ್ತರು
ಕಾರ್ಮಿಕ ಇಲಾಖೆ

**ಇವರಿಗೆ:**

1. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು
2. 8 ಬಿ.ಬಿ.ಎಂ.ಪಿ ವಲಯದ ಜಂಟಿ ಆಯುಕ್ತರು

**ಪ್ರತಿ ಮುಂದಿನ ಕ್ರಮಕ್ಕಾಗಿ:**

1. ಎಲ್ಲಾ ನೋಡಲ್ ಅಧಿಕಾರಿಗಳು,
2. ಎಲ್ಲಾ ಉಪಕಾರ್ಮಿಕ ಆಯುಕ್ತರು
3. ಎಲ್ಲಾ ಸಹಾಯಕ ಕಾರ್ಮಿಕ ಆಯುಕ್ತರು,
4. ಎಲ್ಲಾ ಕಾರ್ಮಿಕ ಅಧಿಕಾರಿಗಳು,
5. ಎಲ್ಲಾ ಹಿರಿಯ ಕಾರ್ಮಿಕ ನಿರೀಕ್ಷಕರು,
6. ಎಲ್ಲಾ ಕಾರ್ಮಿಕ ನಿರೀಕ್ಷಕರು